ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪಂರಾ 244 ಜಿಪಸ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಕಟ್ಟಡ,
ಬೆಂಗಳೂರು, ದಿನಾಂಕ:29-06-2021.

## ಸೇರ್ಪಡೆ

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 244 ಜಿಪಸ 2021, ದಿನಾಂಕ:02-06-2021 ರಲ್ಲಿ 2021-22ನೇ ಸಾಲಿನ ಪ್ರತಿ ತಾಲ್ಲೂಕು ಪಂಚಾಯತಿಗಳಿಗೆ ರಾಜ್ಯ ಹಣಕಾಸು ಆಯೋಗ ತಾಲ್ಲೂಕು ಪಂಚಾಯತ್ ಅನಿರ್ಬಂಧಿತ ಅನುದಾನದ ಬಳಕೆಗೆ ಸಂಬಂಧಿಸಿದಂತೆ ಅನುದಾನವನ್ನು ವಿನಿಯೋಗಿಸುವ ಸಂದರ್ಭದಲ್ಲಿ ಅಭಿವೃದ್ಧಿ ಯೋಜನೆಗಳನ್ನು ತಯಾರಿಸುವಾಗ ಗ್ರಾಮೀಣ ಪ್ರದೇಶದ ಜನರ ಜೀವನ ಮಟ್ಟವನ್ನು ಹೆಚ್ಚಿಸಲು ಅನುಕೂಲವಾಗುವಂತಹ ಕುಡಿಯುವ ನೀರು ಮತ್ತು ನೈರ್ಮಲ್ಯ, ಶಿಕ್ಷಣ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಸಂಪರ್ಕ ರಸ್ತೆಗಳು ಹಾಗೂ ಇತರೆ ವಲಯಗಳಿಗೆ ಸಂಬಂಧಿಸಿದ ಕ್ಷೇತ್ರಗಳಿಗೆ ಆದ್ಯತೆ ನೀಡಲಾಗಿರುತ್ತದೆ. ಇದರೊಂದಿಗೆ ಈ ಕೆಳಕಂಡ ಕಾರ್ಯಕ್ರಮಗಳಿಗೂ ಆದ್ಯತೆ ನೀಡುವಂತೆ ತಿಳಿಸಿದೆ.

1. ವಿದ್ಯಾರ್ಥಿ ನಿಲಯ ಪ್ರಾರಂಭವಾದ ದಿನದಿಂದಲೂ ಹಾಸಿಗೆ ಮತ್ತು ಮಂಚ (cots and beds) ಇಲ್ಲದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಿಗೆ ಹಾಸಿಗೆ ಮತ್ತು ಮಂಚ (cots and beds) ನಿಯಮಾನುಸಾರವಾಗಿ ಖರೀದಿಸಲು ಅವಕಾಶ ನೀಡುವುದು.
2. ತಡೆಗೋಡೆ ಇಲ್ಲದಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು ಹಾಗೂ ಬಾಲಕಿಯರ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ತಡೆಗೋಡೆ (Compound) ನಿರ್ಮಾಣ ಕಾಮಗಾರಿಯನ್ನು ತೆಗೆದುಕೊಳ್ಳಲು ಅವಕಾಶ ನೀಡುವುದು.
3. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಶೇ.85 ಕ್ಕಿಂತ ಹೆಚ್ಚು ದಾಖಲಾತಿ ಇರುವ ಬಾಲಕಿಯರ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯತೆ ದೃಷ್ಟಿಯಿಂದ ನಿಯಮಾನುಸಾರ Washing Machine ಖರೀದಿಸಲು ಅವಕಾಶ ನೀಡುವುದು.
4. ಸ್ವಂತ ಕಟ್ಟಡದಲ್ಲಿ ಇರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಉಪಯೋಗಕ್ಕಾಗಿ Nutrition Garden ನಿರ್ಮಾಣ ಮಾಡಲು MGNREGA ಯೋಜನೆಯಡಿಯಲ್ಲಿ ಸಮನ್ವಯ ಸಾಧಿಸಿ ನಿರ್ಮಾಣ ಮಾಡಲು ಅವಕಾಶ ನೀಡುವುದು.

B. Naveenkumar 29/06/21
(ಬಿ. ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
29/06/21

ಗೆ:

1. ಪ್ರಧಾನ ಮಹಾಲೇಖಪಾಲರು (ಎ&ಇ), ಲೆಕ್ಕ ಪರಿಶೋಧನೆ 1&2, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತಿಗಳು.
3. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು.

4. ವಿಶೇಷಾಧಿಕಾರಿಗಳು (ಜಿ.ಪಂ), ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜ ಭವನ, ಬೆಂಗಳೂರು.
7. ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿಗಳು.
8. ಸಂಬಂಧಪಟ್ಟ ಜಿಲ್ಲಾ ಖಜಾನೆ ಅಧಿಕಾರಿಗಳು.
9. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಕಂಪ್ಯೂಟರ್ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು(ಪಂ.ರಾಜ್-2)ರವರ ಆಪ್ತ ಸಹಾಯಕ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.